# ಕರ್ನಾಟಕ ಸರಕಾರ

ಗ್ರಾಮಲೆಕ್ಕಿಗರ ನೇರನೇಮಕಾತಿ ಆಯ್ಕೆ ಪ್ರಾಧಿಕಾರ

ಜಿಲ್ಲಾಧಿಕಾರಿಗಳ ಕಚೇರಿ,ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು - 575001

*****

## ಗ್ರಾಮಲೆಕ್ಕಿಗರ ಹುದ್ದೆಯ ನೇರ ನೇಮಕಾತಿ ಸಂಬಂಧ

## ಮಾಹಿತಿ ಸೂಚಿ - *2018*

**ಕ್ಯಾಲೆಂಡರ್ ಆಫ್ ಇವೆಂಟ್ಸ್ (Calender of Events)**

| ಕ್ರ. ಸಂ | ವಿವರ | ದಿನಾಂಕ |
|---|---|---|
| 1 | ಅರ್ಜಿ ಕರೆಯಲು ನಿಗದಿಪಡಿಸಿದ ದಿನಾಂಕ | **01-10-2018** |
| 2 | ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **31-10-2018** |
| 3 | ಮೂಲದಾಖಲೆಗಳ ಪರಿಶೀಲನೆಗಾಗಿ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ಪ್ರಕಟಿಸುವ ದಿನಾಂಕ | **12-11-2018** |
| 4 | ತಾತ್ಕಾಲಿಕ ಪರಿಶೀಲನಾ ಪಟ್ಟಿಯಂತೆ ಅಭ್ಯರ್ಥಿಗಳು ಮೂಲ ದಾಖಲೆಗಳೊಂದಿಗೆ ಪರಿಶೀಲನೆಗೆ ಜಿಲ್ಲಾಧಿಕಾರಿಗಳ ಕಚೇರಿಗೆ ಹಾಜರಾಗ ಬೇಕಾದ ದಿನಾಂಕ ಮತ್ತು ಸಮಯ | **28-11-2018** |
| 5 | ಮೂಲಅಂಕಪಟ್ಟಿಯನ್ನು ಸಲ್ಲಿಸಲು ಹಾಜರಾಗಬೇಕಾದ ದಿನ ( ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗುವುದು ) | **07-12-2018** |
| 5 | ಜಿಲ್ಲಾಧಿಕಾರಿ ಕಛೇರಿ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸುವ ದಿನಾಂಕ | **15-12-2018** |
| 6 | ವೆಬ್ ಸೈಟ್ ವಿಳಾಸ | http://dk-va.kar.nic.in |
| 7 | ಮಾಹಿತಿಗಾಗಿ ಸಂಪರ್ಕಿಸ ಬಹುದಾದ ಹೆಲ್ಪ್ ಲೈನ್ | **0824-2220590** |

( ಎಸ್. ಸಸಿಕಾಂತ್ ಸೆಂಥಿಲ್ )

ಅಧ್ಯಕ್ಷರು,

ಗ್ರಾಮಲೆಕ್ಕಿಗರ ನೇರನೇಮಕಾತಿ ಆಯ್ಕೆ ಪ್ರಾಧಿಕಾರ

ಮತ್ತು ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ಕಂದಾಯ ಇಲಾಖೆ

# ಜಿಲ್ಲಾಧಿಕಾರಿಯವರ ಕಚೇರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು

## ಅಧಿಸೂಚನೆ

**ಇಎಸ್ ಟಿ (2)ಸಿಆರ್.92/2018/53535/ಎ2** **ದಿನಾಂಕ : 22-09-2018**

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ದಕ್ಷಿಣ ಕನ್ನಡ ಜಿಲ್ಲಾ ಘಟಕದಲ್ಲಿ ಬರುವ ತಾಲೂಕುಗಳಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ಕರ್ನಾಟಕ ಸಾಮಾನ್ಯ ಸೇವೆಗಳು (ರೆವೆನ್ಯೂ ಸಬೊರ್ಡಿನೇಟ್ ಬ್ರಾಂಚ್) (ಕೇಡರ್ ಎಂಡ್ ರಿಕ್ರ್ಯೂಟ್ ಮೆಂಟ್) (ತಿದ್ದುಪಡಿ) ನಿಯಮಗಳು 2008 ಮತ್ತು 2009 ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರವು ನೀಡಿರುವ ಅನುಮೋದನೆಯಂತೆ ಜಿಲ್ಲೆಯಲ್ಲಿನ 34 ಖಾಲಿ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗದಿಪಡಿಸಿದ ನಮೂನೆಯಲ್ಲಿ ಅರ್ಜಿಗಳನ್ನು ಆನ್ ಲೈನ್ ಮೂಲಕ ಆಹ್ವಾನಿಸ ಲಾಗಿದೆ.

| ವಿವರ | ದಿನಾಂಕ | ವೆಬ್ ಸೈಟ್ ವಿಳಾಸ |
|---|---|---|
| ಅರ್ಜಿ ಕರೆಯಲು ನಿಗದಿಪಡಿಸಿದ ದಿನಾಂಕ | **01-10-2018** | **http://dk-va.kar.nic.in** |
| ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **31-10-2018** | |
| ಅರ್ಜಿ ಶುಲ್ಕವನ್ನು ಬ್ಯಾಂಕಿಗೆ ಪಾವತಿಸಲು ಕೊನೆಯ ದಿನಾಂಕ | **02-11-2018** | |

**ಹುದ್ದೆಗಳ ವರ್ಗೀಕರಣ : ಒಟ್ಟು ಖಾಲಿ ಹುದ್ದೆಗಳು : 34**

| ಖಾಲಿ ಹುದ್ದೆಗಳು ( ರೋಸ್ಟರ್ ಬಿಂದು ) : 49 ರಿಂದ 82 ರವರೆಗೆ | | | | | | | | | |
|---|---|---|---|---|---|---|---|---|---|
| ಕ್ರ. ಸಂ | ವರ್ಗೀಕರಣದ ವಿವರ | ಸಾಮಾನ್ಯ | ಮಹಿಳಾ | ಗ್ರಾಮೀಣ | ಅಂಗವಿಕಲ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತರು | ಒಟ್ಟು |
| 1 | ಸಾಮಾನ್ಯ ಅರ್ಹತೆ | 04 | 05 | 04 | 01 | 02 | - | 01 | **17** |
| 2 | ಪರಿಶಿಷ್ಟ ಜಾತಿ | - | 02 | 02 | - | - | 01 | 01 | **06** |
| 3 | ಪರಿಶಿಷ್ಟ ಪಂಗಡ | - | 01 | - | - | - | - | - | **01** |
| 4 | ಪ್ರವರ್ಗ- I | - | 01 | 01 | - | - | - | - | **02** |
| 5 | ಪ್ರವರ್ಗ- IIA | - | 02 | 01 | - | - | 01 | 01 | **05** |
| 6 | ಪ್ರವರ್ಗ- II B | - | 01 | - | - | - | - | - | **01** |
| 7 | ಪ್ರವರ್ಗ- IIIA | - | 01 | - | - | - | - | - | **01** |
| 8 | ಪ್ರವರ್ಗ- III B | - | 01 | - | - | - | - | - | **01** |
| | **ಒಟ್ಟು ಜುಮ್ಲಾ** | **04** | **14** | **08** | **01** | **02** | **02** | **03** | **34** |

1. <u>ಅರ್ಜಿ ಸಲ್ಲಿಸುವ ವಿಧಾನ:-</u> ಅರ್ಜಿಗಳನ್ನು ಆನ್-ಲೈನ್ (Online) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದಾಗಿದೆ. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

2. <u>ಅರ್ಜಿ ಶುಲ್ಕ:-</u>

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಾಗೂ ಪ್ರವರ್ಗ-1 | ರೂ.250=00 |
| ಸಾಮಾನ್ಯ ವರ್ಗ, 2ಎ, 2ಬಿ, 3ಎ, 3ಬಿ ವರ್ಗಕ್ಕೆ | ರೂ.500=00 |
| ಅಂಗವಿಕಲ ಅಭ್ಯರ್ಥಿಗಳಿಗೆ | **ಶುಲ್ಕ ವಿನಾಯಿತಿ** |

3. <u>ಆನ್-ಲೈನ್ (Online) ಮುಖಾಂತರ ಅರ್ಜಿ ಸಲ್ಲಿಸುವ ವಿಧಾನ</u> :- ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್ ಸೈಟ್ **http://dk-va.kar.nic.in** ತೆರೆದು ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು. ಅಭ್ಯರ್ಥಿಯು Submit Button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ (Reference Number) ಸೃಷ್ಟಿಯಾಗುತ್ತದೆ. ಆನ್-ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತಿ ಪತ್ರ (Acknowledgement slip) ಮತ್ತು ದ್ವಿಪ್ರತಿ ಚಲನ್ ನ್ನು ತೆಗೆದುಕೊಳ್ಳತಕ್ಕದ್ದು. ಈ ಚಲನ್ ನ್ನು ಅರ್ಜಿ ಶುಲ್ಕದೊಂದಿಗೆ ಕಾರ್ಪೋರೇಶನ್ ಬ್ಯಾಂಕ್ ಅಥವಾ ಐ.ಸಿ.ಐ.ಸಿ.ಐ ಬ್ಯಾಂಕ್ ಕರ್ನಾಟಕದಲ್ಲಿ ಯಾವುದಾದರೂ ಶಾಖೆಯಲ್ಲಿ ಪಾವತಿಸಬೇಕು. <u>ಅಭ್ಯರ್ಥಿಗಳು ಸ್ವೀಕೃತಿ ಸ್ಲಿಪ್ ನ್ನು ಮತ್ತು ಚಲನ್ ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು. ಇನ್ನೊಂದು ಚಲನ್ ಪ್ರತಿ ಬ್ಯಾಂಕ್ ಬಳಿ ಇರುತ್ತದೆ</u>. ಈ ಸಂಪೂರ್ಣ ದಾಖಲೆಗಳನ್ನು ಪರಿಶೀಲನೆಗೆ ಮುಂದೆ ನಿಗದಿಪಡಿಸುವ ದಿನಾಂಕದಂದು ಹಾಜರುಪಡಿಸತಕ್ಕದ್ದು. ಬ್ಯಾಂಕಿನಲ್ಲಿ ನಿಗಧಿತ ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ: **02-11-2018** ರಂದೇ ಆಗಿರುತ್ತದೆ. ಶುಲ್ಕ ಪಾವತಿಸುವ ಚಲನ್ ಅನ್ನು ದಿನಾಂಕ : **02-11-2018** ರ ಸಂಜೆ **5.30** ಒಳಗಾಗಿಯೇ ಅಪ್ಲೋಡ್ ಮಾಡಬೇಕು. ನಿಗಧಿತ ಅರ್ಜಿ ಶುಲ್ಕ ಹೊರತು ಪಡಿಸಿ ಯಾವುದೇ ವಿಧವಾದ ಬ್ಯಾಂಕ್ ಶುಲ್ಕ ಪಾವತಿಸುವ ಅವಕಾಶ ಇರುವುದಿಲ್ಲ. ಡಿ.ಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಅಲ್ಲದೆ ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರ ಯಾವುದೇ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. <u>ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು</u>.

ಅರ್ಜಿ ಮತ್ತು ಅರ್ಜಿ ಶುಲ್ಕ ಪಾವತಿ ವಸ್ತು ಸ್ಥಿತಿಯ ಬಗ್ಗೆ ಅಭ್ಯರ್ಥಿಗಳು ಆನ್ ಲೈನ್ ನಲ್ಲಿ ಪರಿಶೀಲಿಸಿ Application Status ಖಚಿತಪಡಿಸಿಕೊಳ್ಳುವುದು.

4. <u>ಅರ್ಹತಾ ಷರತ್ತುಗಳು:</u>

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ/ಮಾನಸಿಕ ನ್ಯೂನತೆಯಿಂದ ಮುಕ್ತರಾಗಿರತಕ್ಕದ್ದು.

5.<u>ಶೈಕ್ಷಣಿಕ ವಿದ್ಯಾರ್ಹತೆ :</u>

| |
|---|
| 1.ದ್ವಿತಿಯ ಪಿ.ಯು.ಸಿ. ಪರೀಕ್ಷೆ ಅಥವಾ **CBSE** ಅಥವಾ **ICSE** ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ಮಾತ್ರ ತೇರ್ಗಡೆ ಹೊಂದಿರಬೇಕು.<br>2. ಕಂಪ್ಯೂಟರ್ ಜ್ಞಾನವುಳ್ಳವರಾಗಿರಬೇಕು.<br>3.<u>ವೃತ್ತಿಪರ ಕೋರ್ಸು</u> ಹಾಗೂ ಯಾವುದೇ ಇತರೆ <u>ತತ್ಸಮಾನ</u> ವಿದ್ಯಾರ್ಹತೆಗಳನ್ನು " ಮಾಡಿರುವ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಒಂದು ವೇಳೆ ಅಂತವರು ಅರ್ಜಿ ಸಲ್ಲಿಸಿದ್ದಲ್ಲಿ ಪರಿಗಣಿಸಲಾಗುವುದಿಲ್ಲ.<br>4. <u>ಜೆ.ಓ.ಸಿ</u> ಮತ್ತು <u>ಡಿಪ್ಲೋಮಾ</u> ಇನ್ನಿತರ ಯಾವುದೇ ವಿದ್ಯಾರ್ಹತೆಗಳನ್ನು ಈ ಹುದ್ದೆಗೆ ಪರಿಗಣಿಸಲಾಗುವುದಿಲ್ಲ. |

**6. ವೇತನ ಶ್ರೇಣಿ: :**

ರೂ.21400-500-22400-550-24600-600-27000-650-29600-750-32600-850-36000-950-39800-1100-42000.

7. ವಯೋಮಿತಿ : ಸರಕಾರದ ಅಧಿಸೂಚನೆ ಸಂಖ್ಯೆ ಸಿ.ಆ.ಸು.ಇ 42 ಎಸ್.ಆರ್.ಆರ್ 2008 ದಿನಾಂಕ : 17-11-2008 ರಂತೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವಾದ **31-10-2018** ರಂದು ಈ ಕೆಳಗಿನಂತೆ ವಯೋಮಿತಿ ಹೊಂದಿರತಕ್ಕದ್ದು.

| ವರ್ಗಗಳು | ಕನಿಷ್ಠ | ಗರಿಷ್ಠ |
|---|---|---|
| ಪರಿಶಿಷ್ಟ ಜಾತಿ/.ಪರಿಶಿಷ್ಟ ಪಂಗಡ/ಪ್ರ ವರ್ಗ-1 | **18** | **40** |
| 2ಎ, 2ಬಿ, 3ಎ, 3ಬಿ | **18** | **38** |
| ಸಾಮಾನ್ಯ ವರ್ಗ | **18** | **35** |

ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರ (ಟಿಸಿ) ಅಥವಾ ಕ್ಯುಮುಲೇಟಿವ್ ರೆಕಾರ್ಡ್ ನಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಮಾತ್ರ ಆಯ್ಕೆ ಪ್ರಾಧಿಕಾರದಿಂದ ಪರಿಗಣಿಸಲಾಗುವುದು. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) 1977ರ ನಿಯಮಾವಳಿಗಳ ನಿಯಮ 6 ರಂತೆ ವಯೋಮಿತಿ ಯನ್ನು ಈ ಮುಂದಿನ ಪ್ರಕರಣಗಳಲ್ಲಿ ಮುಂದೆ ಹೇಳಿರುವಷ್ಟರ ಮಟ್ಟಿಗೆ ಹೆಚ್ಚಿಸಲು ಅವಕಾಶವಿದೆ.

i. ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಅಡಿಯಲ್ಲಿನ ಸರ್ಕಾರದಿಂದ ಸ್ಥಾಪಿತವಾಗಿದ್ದು ಮತ್ತು ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಆತ ಅಂಥ ಹುದ್ದೆಯನ್ನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ಅಥವಾ ಹತ್ತು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ii. ಮಾಜಿ ಸೈನಿಕನಾಗಿರುವ, ಅಭ್ಯರ್ಥಿಯ ಸಂದರ್ಭದಲ್ಲಿ ಮೂರು ವರ್ಷಗಳು ಮತ್ತು ಇದಕ್ಕೆ ಕೇಂದ್ರದ ಸಶಸ್ತ್ರ ಪಡೆಗಳಲ್ಲಿ ಅವನು ಸೇವೆ ಸಲ್ಲಿಸಿರುವಷ್ಟು ವರ್ಷಗಳನ್ನು ಸೇರಿಸಬೇಕು.

iii. ಪೂರ್ಣಾವಧಿ ಕೆಡೆಟ್ ಇನ್ ಸ್ಟ್ರಕ್ಟರ್ ಆಗಿ ಸೇವೆ ಸಲ್ಲಿಸಿದ ತರುವಾಯ, ರಾಷ್ಟ್ರೀಯ ಕೆಡೆಟ್ ದಳದಿಂದ ಬಿಡುಗಡೆ ಮಾಡಿದ ಅಭ್ಯರ್ಥಿಯ ಸಂದರ್ಭದಲ್ಲಿ, ಹಾಗೆ ಕೆಡೆಟ್ ಇನ್ ಸ್ಟ್ರಕ್ಟರಾಗಿ ಆತನು ಸೇವೆ ಸಲ್ಲಿಸಿರುವಷ್ಟು ವರ್ಷಗಳು.

iv. ರಾಜ್ಯ ಸರ್ಕಾರ ಪ್ರಾಯೋಜಿತ ಗ್ರಾಮೀಣ ಕೈಗಾರೀಕರಣ ಯೋಜನೆಯಲ್ಲಿ ನೇಮಕಗೊಂಡ ಗ್ರಾಮ ಸಮೂಹ ಇನ್ಸ್ ಪೆಕ್ಟರ್ ಆಗಿರುವ ಅಥವಾ ಆಗಿದ್ದಂಥ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥ ಗ್ರಾಮ ಸಮೂಹ ಇನ್ಸ್ ಪೆಕ್ಟರಾಗಿ ಆತ ಸೇವೆ ಸಲ್ಲಿಸಿರುವಷ್ಟು ವರ್ಷಗಳು.

v. ಅಂಗವಿಕಲನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು.

vi. ಈ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಹುದ್ದೆಯನ್ನು ಧಾರಣೆ ಮಾಡಿರುವ ಅಥವಾಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥ ಹುದ್ದೆಯನ್ನು ಆತನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ವರ್ಷಗಳು ಅಥವಾ ಐದು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

vii. ಅಭ್ಯರ್ಥಿ ವಿಧವೆಯಾಗಿರುವಾಗ , ಹತ್ತು ವರ್ಷಗಳು.

viii. ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು.

**8. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು:**

1. ಜಾತಿ ಮೀಸಲಾತಿ ಕೋರಬಯಸುವ :

   (i) ಪ.ಜಾ/ಪ.ಪಂ. ಅಭ್ಯರ್ಥಿಗಳು ನಮೂನೆ `ಡಿ` ರಲ್ಲಿ

   (ii) ಪ್ರವರ್ಗ-1 ರ ಅಭ್ಯರ್ಥಿಗಳು ನಮೂನೆ `ಇ` ನಲ್ಲಿ

2. 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ `ಎಫ್ `ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರಗಳು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ : **31-10-2018** ರೊಳಗೆ ಪಡೆದಿರಬೇಕು. ನಂತರದ ದಿನಾಂಕಗಳಲ್ಲಿ ಪಡೆದಲ್ಲಿ ಪರಿಗಣಿಸಲಾಗುವುದಿಲ್ಲ.

3. ಜಾತಿ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿ, (ಅಧ್ಯಕ್ಷರು, ಜಾತಿ ಆದಾಯ ಪರಿಶೀಲನಾ ಸಮಿತಿ)ಯವರಿಂದ ಸಿಂಧುತ್ವ ಪ್ರಮಾಣ ಪತ್ರ ಹಾಜರುಪಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

**9. ಮಹಿಳಾ ಅಭ್ಯರ್ಥಿ:**

ಸರಕಾರಿ ಆದೇಶ ಸಂಖ್ಯೆ.ಸಿಆಸುಇ.143.ಸೆನೆನಿ.2015 ದಿನಾಂಕ: 08-01-2016 ರಲ್ಲಿ ನಿರ್ದೇಶಿಸಿದಂತೆ ಬಿಂದು **11, 51** ಮತ್ತು **91** ನೇ ಸ್ಥಾನಗಳನ್ನು ಮಹಿಳೆಯರಿಗೆ ಮೀಸಲಿರಿಸಬೇಕಾಗಿದೆ. ಅದರಂತೆ `` **51**`` ನೇ ಬಿಂದುವನ್ನು ``ಮಹಿಳಾ ಅಭ್ಯರ್ಥಿಗೆ`` ಮೀಸಲಿರಿಸಲಾಗಿದೆ.

**10. ಗ್ರಾಮೀಣ ಅಭ್ಯರ್ಥಿ:**

1. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10ನೇ ತರಗತಿಯ ವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರಬೇಕು.
2. ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ , ಪ್ರವರ್ಗ-1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ 2ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.
3. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪರಿಶೀಲನಾ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದಿಟ್ಟುಕೊಂಡಿರತಕ್ಕದ್ದು.

***ಸೂಚನೆ: ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ- 2 ರಲ್ಲಿಯ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು***

**11. ಕನ್ನಡ ಮಾಧ್ಯಮ ಅಭ್ಯರ್ಥಿ:**

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಪಡೆದಿರತಕ್ಕದ್ದು.

**12. ಯೋಜನಾ ನಿರಾಶ್ರಿತ ಅಭ್ಯರ್ಥಿ:**

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು.

13. ಅಂಗವಿಕಲರ ಮೀಸಲಾತಿ ಬಗ್ಗೆ:

ಕರ್ನಾಟಕ ನಾಗರೀಕ ಸೇವಾ ( ಸಾಮಾನ್ಯ ನೇಮಕಾತಿ ) ನಿಯಮಗಳು, 1977 ರ ನಿಯಮ 9 (1 - ಎ) ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್ ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡಾ **5** ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ **128** ಸೆನೆನಿ **2006** ದಿನಾಂಕ **01-08-2009** ರಂತೆ ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡಾ **5** ರಷ್ಟು ಮೀಸಲಾತಿಯಲ್ಲಿ , **ಶೇ.2** ನ್ನು ದೃಷ್ಟಿ ಮಾಂದ್ಯತೆಯುಳ್ಳವರಿಗೆ, ತಲಾ **ಶೇ.1** ನ್ನು ಶ್ರವಣದೋಷವುಳ್ಳವರಿಗೆ, ಚಲನವಲನ ವೈಕಲ್ಯವುಳ್ಳವರಿಗೆ ಮತ್ತು ಕುಷ್ಠ ರೋಗದಿಂದ ಗುಣಮುಖರಾದ ಅಂಗವಿಕಲರಿಗೆ / ಬುದ್ಧಿಮಾಂದ್ಯತೆ / ಮಾನಸಿಕ ಅಸ್ವಸ್ಥತೆ ಹೊಂದಿರುವವರಿಗೆ ಮೀಸಲಿರಿಸಲು ಆದೇಶಿಸಿದೆ.

ಆದರೆ ಸರಕಾರದ ಅಧಿಸೂಚನೆ ಸಂ.DPAR 54 SSR 2012 ದಿ:23-06-2012 ರಂತೆ ಗ್ರಾಮಲೆಕ್ಕಿಗರ ನೇರ ನೇಮಕಾತಿ ಹುದ್ದೆಗೆ 1. ಕುಷ್ಠ ರೋಗದಿಂದ ಗುಣಮುಖರಾದವರು (Leprosy cured) 2. ಶ್ರವಣ ದೋಷವುಳ್ಳವರು (Hearing impaired) 3. ಮಾನಸಿಕ ಅಸ್ವಸ್ಥತೆ (Mentally ill) 4. ಚಲನ ವಲನ ವೈಕಲ್ಯತೆ (Locomotor Disability) ಅಂಗವಿಕಲರ ಮೀಸಲಾತಿಯನ್ನು ಕಲ್ಪಿಸಿರುವುದರಿಂದ, **ದೃಷ್ಟಿಮಾಂದ್ಯತೆಯುಳ್ಳ ಅಂಗವಿಕಲ ಅಭ್ಯರ್ಥಿಗಳ ಅರ್ಜಿಗಳನ್ನು ಸಲ್ಲಿಸಲು ಅರ್ಹರಲ್ಲ.**

ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 128 ಸೆನೆನಿ 2006 ದಿನಾಂಕ 1-8-2009 ರಂತೆ ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡಾ 5 ರಷ್ಟು ಮೀಸಲಾತಿ ಇರಿಸಿದ್ದು, ಪ್ರಸ್ತುತ ಅಧಿಸೂಚನೆಯಲ್ಲಿ ನಮೂದಿಸಿದ ಒಂದು **(1) ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಯು ರೋಸ್ಟರ್ ಬಿಂದು " 84 " ಆಗಿರುತ್ತದೆ. ಅಂತೆಯೇ 84 ನೇ ರೋಸ್ಟರ್ ಬಿಂದು ಕುಷ್ಠರೋಗದಿಂದ ಗುಣಮುಖರಾದ ಅಂಗವಿಕಲರಿಗೆ/ ಬುದ್ಧಿಮಾಂದ್ಯತೆ/ ಮಾನಸಿಕ ಅಸ್ವಸ್ಥತೆ (Mentally ill) ಅಂಗವಿಕಲತೆಗೆ ಮೀಸಲಿರುತ್ತದೆ. ಈ ಬಿಂದುಗಳೆದುರು ನಿರ್ದಿಷ್ಟಪಡಿಸಿದ ಅಂಗವಿಕಲ ಅಭ್ಯರ್ಥಿಗಳು ಲಭ್ಯವಾಗ ದಿದ್ದಲ್ಲಿ ಬೇರೆ ಅಂಗವಿಕಲತೆ ಇರುವವರನ್ನು ಮೆರಿಟ್ ಆಧಾರದಲ್ಲಿ ನಿಯಾಮಾನುಸಾರ ಆಯ್ಕೆಗೆ ಪರಿಗಣಿಸಲಾಗುವುದು.**

ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 128 ಸೆನೆನಿ 2005, ದಿನಾಂಕ 19/11/2005 ರಲ್ಲಿ ನಿಗದಿ ಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು ಕೊಂಡಿರತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ.

*ಸೂಚನೆ: ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿ : **31-10-2018** ರೊಳಗೆ ಅರ್ಹತೆ ಯನ್ನು ಪಡೆದಿರಬೇಕು. "ತಾತ್ಕಾಲಿಕ ಪರಿಶೀಲನಾ ಪಟ್ಟಿಯಲ್ಲಿ ಹೆಸರು ಪ್ರಕಟಗೊಂಡ ಅಭ್ಯರ್ಥಿಗಳು " ಮಾತ್ರ ಮುಂದೆ ಸೂಚಿಸುವ ದಿನಾಂಕದಂದು ನೇಮಕಾತಿ ಪ್ರಾಧಿಕಾರದ ಎದುರು (ದಕ್ಷಿಣ ಕನ್ನಡ ಜಿಲ್ಲಾಧಿಕಾರಿಯವರ ಕಚೇರಿ, 2ನೇ ಮಹಡಿ ಸಭಾಂಗಣ ) ಮೂಲ ಪ್ರಮಾಣ ಪತ್ರಗಳನ್ನು ತಪ್ಪದೆ ಹಾಜರುಪಡಿಸ ತಕ್ಕದ್ದು.*

14. ಆಯ್ಕೆ ವಿಧಾನ :

ಕರ್ನಾಟಕ ಜನರಲ್ ಸರ್ವೀಸಸ್ (Revenue Subordinate Branch) (Cadre & Recruitment) (ತಿದ್ದುಪಡಿ) ನಿಯಮಗಳು 2008 ಮತ್ತು 2009 ಹಾಗೂ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ಪ್ರಕಾರ ಅಭ್ಯರ್ಥಿಯನ್ನು ಅವರು ದ್ವಿತೀಯ ಪಿ.ಯು.ಸಿ. ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ (on merit) ಆಧಾರದ ಮೇಲೆ ಮಾತ್ರ ಆಯಾಯ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು. ನಿಯಮಾವಳಿಯಂತೆ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ಈ ಕಚೇರಿಯ ವೆಬ್ ಸೈಟ್ ನಲ್ಲಿ ( http://dk.nic.in) ಪ್ರಕಟಿಸಲಾಗುವುದು.

**15. ಪ್ರಮುಖ ಸೂಚನೆಗಳು :**

ಈ ಕೆಳಕಂಡ ಮೂಲ ಪ್ರಮಾಣ ಪತ್ರಗಳನ್ನು ಮುಂದೆ ಸೂಚಿಸುವ ದಿನಾಂಕದಂದು ಪರಿಶೀಲನೆಗೆ ಹಾಜರು ಪಡಿಸತಕ್ಕದ್ದು.

- ಪಿಯುಸಿ ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12ನೇ ತರಗತಿ ಪರೀಕ್ಷೆಯ ಮೂಲ ಅಂಕಪಟ್ಟಿ.
- ಹುಟ್ಟಿದ ದಿನಾಂಕದ ಪ್ರಮಾಣ ಪತ್ರ ( ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಅಥವಾ ಕ್ಯುಮುಲೇಟಿವ್ ದಾಖಲೆ ).
- ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (No Objection Certificate) ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಪಡೆದಿಟ್ಟು ಕೊಂಡಿರಬೇಕು.
- ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ವಿಧವೆಯರು, ಜೀತ ಕಾರ್ಮಿಕರು, ಗ್ರಾಮ ಸಮೂಹ ಪರಿಶೀಲಕರು ಮತ್ತು ಕ್ಯಾಡೆಟ್ ಪರಿವೀಕ್ಷಕರು ಇವರುಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
- ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ.
- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ.
- ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ.
- ಅಂಗವಿಕಲ ಮೀಸಲಾತಿ ಬಗ್ಗೆ ವೈದ್ಯಕೀಯ ಮಂಡಳಿ ಪ್ರಮಾಣ ಪತ್ರ
- ಪರಿಶಿಷ್ಟ ಜಾತಿ-ಪರಿಶಿಷ್ಟ ಪಂಗಡ ***(ನಮೂನೆ– ಡಿ)*** ಮತ್ತು ಪ್ರವರ್ಗ-1 ***( ನಮೂನೆ– ಇ)*** ಹಾಗೂ 2ಎ, 2ಬಿ, 3ಎ, 3ಬಿ ***( ನಮೂನೆ ಎಫ್)*** ಮೀಸಲಾತಿ ಅಭ್ಯರ್ಥಿಗಳು ಕ್ರಮವಾಗಿ ನಮೂನೆ ಡಿ /ಇ / ಎಫ್ ನಲ್ಲಿ ತಹಶೀಲ್ದಾರ್ ರವರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟು ಕೊಂಡಿರತಕ್ಕದ್ದು.

**16. ಸಾಮಾನ್ಯ ಸೂಚನೆಗಳು :**

1. ನೈತಿಕ ದುರ್ನಡತೆಯಿಂದಾಗಿ / ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ/ಕೇಂದ್ರ/ಸ್ಥಳೀಯ ಸಂಸ್ಥೆ ಕಚೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ವಜಾ ಮಾಡಲ್ಪಟ್ಟಿದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
2. ಅರ್ಜಿಯಲ್ಲಿ ತಪ್ಪು / ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
3. ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
4. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಆನ್ ಲೈನ್ ಮುಖಾಂತರ ವೆಬ್ ಸೈಟ್ ನಲ್ಲಿ ಲಭ್ಯವಿರುವ ಸೂಚನೆಗಳನ್ನು ಪಾಲಿಸಬೇಕು.
5. ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.
6. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.
7. ಆಯ್ಕೆ ಸಂಬಂಧವಾಗಿ ಈ ಕಚೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದ ಇರುವುದಿಲ್ಲ.
8. ನಿಗದಿಪಡಿಸಿದ ದಿನಾಂಕದಂದು ದಾಖಲೆ ಪರಿಶೀಲನೆಗೆ ಹಾಜರಾಗುವ ದಿನ ಮೂಲದಾಖಲೆಗಳನ್ನು ಹಾಗೂ ಮೂಲ ಅಂಕಪಟ್ಟಿಯನ್ನು ಪರಿಶೀಲಿಸಲಾಗುವುದು. ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸುವ ಮುಂಚಿತವಾಗಿ ಮೂಲ ಅಂಕಪಟ್ಟಿಯನ್ನು ಅರ್ಹ ಅಭ್ಯರ್ಥಿಗಳಿಂದ ಪಡೆಯಲಾಗುವುದು. ನಂತರ ಸಂಬಂಧಿಸಿದ ಇಲಾಖೆಗೆ ಕಳುಹಿಸಿ ಅಂಕಪಟ್ಟಿಯ

ನೈಜತೆಯ ಬಗ್ಗೆ ಪರಿಶೀಲನೆ ನಡೆಸಲಾಗುವುದು.

9.ಮೂಲದಾಖಲೆಯ ಪರಿಶೀಲನೆಗಾಗಿ 1:5 ಅನುಪಾತದಲ್ಲಿ ಅಭ್ಯರ್ಥಿಗಳನ್ನು ಕರೆ ಮಾಡಲಾಗುವುದು.

10. ಕ್ಯಾಲೆಂಡರ್ ಇವೆಂಟ್ಸ್ ದಿನಾಂಕಗಳು ಬದಲಾವಣೆಯ ಶರ್ತಕ್ಕೆ ಒಳಪಟ್ಟಿರುತ್ತದೆ.

11.ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಚೇರಿಯ ಅಧಿಕೃತ ವೆಬ್ ಸೈಟ್ http://dk.nic.in ರಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ, ಅರ್ಜಿ ಸಲ್ಲಿಸುವಾಗ **" INTERNET EXPLORER 6.0 & Above "** ಉಪಯೋಗಿಸುವುದು.

12.ಹೆಚ್ಚಿನ ಮಾಹಿತಿಯು ಅಗತ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ: **0824-2220590** ರಲ್ಲಿ ಕಚೇರಿಯ ಕೆಲಸದ ವೇಳೆಯಲ್ಲಿ ಸಂಪರ್ಕಿಸ ಬಹುದಾಗಿದೆ. ( ***ಕಚೇರಿಯ ಸಮಯ ಪೂರ್ವಾಹ್ನ 10-00 ರಿಂದ ಅಪರಾಹ್ನ 5-30 ರವರೆಗೆ*** )

13.ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆಯ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಯೊಂದು ಮಾಹಿತಿಯನ್ನು ವೆಬ್ ಸೈಟ್ ನಲ್ಲಿ ಅಪಲೋಡ್ ಮಾಡಲಾಗುವುದು. ಅಭ್ಯರ್ಥಿಗಳು ವೆಬ್ ಸೈಟ್ ನ್ನು ಕಾಲಕಾಲಕ್ಕೆ ವೀಕ್ಷಿಸಿ ಮಾಹಿತಿಯನ್ನು ಪಡೆಯತಕ್ಕದ್ದು.

( ಎಸ್. ಸಸಿಕಾಂತ್ ಸೆಂಥಿಲ್ )
ಅಧ್ಯಕ್ಷರು,
ಗ್ರಾಮಲೆಕ್ಕಿಗರ ನೇರನೇಮಕಾತಿ ಆಯ್ಕೆ ಪ್ರಾಧಿಕಾರ
ಮತ್ತು ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ಸಂಕಲನಾಧಿಕಾರಿ, ಸರಕಾರಿ ಹೊರವಲಯ ಮುದ್ರಣಾಲಯ, ಆರ್.ವಿ.ಕಾಲೇಜು ಅಂಚೆ, 8ನೇ ಮೈನ್, ಮೈಸೂರು ರಸ್ತೆ, ಕೆಂಗೇರಿ, **ಬೆಂಗಳೂರು - 560059** ಇವರಿಗೆ ಕಳುಹಿಸುತ್ತಾ, ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಅದರ 200 ಪ್ರತಿಗಳನ್ನು ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರಿಗೆ ಒದಗಿಸಲು ಕೋರಿದೆ.

ಪ್ರತಿ:

1. ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
2. ಸರಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಸೇವೆಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
3. ಪ್ರಾದೇಶಿಕ ಆಯುಕ್ತರು, ಮೈಸೂರುವಿಭಾಗ, ಮೈಸೂರುರವರ ಅವಗಾಹನೆಗೆ ಸಲ್ಲಿಸಿದೆ.
4. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
5. ಜಿಲ್ಲೆಯ ಎಲ್ಲಾ ಉಪವಿಭಾಗಾಧಿಕಾರಿಗಳಿಗೆ / ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳಿಗೆ/ವಿಶೇಷ ತಹಶೀಲ್ದಾರರುಗಳಿಗೆ ಕಳುಹಿಸಿ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ. ಈ ಕಾರ್ಯಾಲಯದ ಸೂಚನಾ ಫಲಕಕ್ಕೆ/ ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ.